### ಸಚಿವರ ಆಕ್ಷೇಪಾರ್ಹ ಹೇಳಿಕೆ ಸರಿಯಲ್ಲ । ಸಂಸದೀಯ ವ್ಯವಸ್ಥೆಯಲ್ಲಿ ಪ್ರತಿಪಕ್ಷವೂ ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕು । ಈ ಬಾರಿ 13 ದಿನಗಳ ಕಾಲ, ಒಟ್ಟು 44 ಗಂಟೆ ಕಲಾಪ ನಡೆದಿದೆ

# ಸುಧಾಕರ್ ಹೇಳಿಕೆ ವಿರುದ್ಧ ಸೂಕ್ತ ಕ್ರಮ: ಕಾಗೇರಿ

26/3/21

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಶಾಸಕರ ಹಾಗೂ ಶಾಸಕರ ಚಾರಿತ್ರ್ಯದ ಬಗ್ಗೆ ವಿವಾದಾತ್ಮಕ ಹೇಳಿಕೆ ನೀಡಿದ್ದ ಆರೋಗ್ಯ ಸಚಿವ ಡಾ. ಕೆ.ಸುಧಾಕರ್ ವಿರುದ್ಧ ಸೂಕ್ತ ಕ್ರಮವಹಿಸುವುದಾಗಿ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಸ್ಪಷ್ಟಪಡಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿದ ಅವರು, ಸಚಿವ ಡಾ. ಕೆ.ಸುಧಾಕರ್ ಆಕ್ಷೇಪಾರ್ಹ ಹೇಳಿಕೆ ಸರಿಯಲ್ಲ. ಅದರ ಬಗ್ಗೆ ಅವರೇ ಸ್ಪಷ್ಟೀಕರಣವನ್ನು ನೀಡಿದ್ದಾರೆ. ಆದರೆ, ಸಭಾಧ್ಯಕ್ಷನಾಗಿ ಸಂಸದೀಯ ವ್ಯವಸ್ಥೆ ಅಡಿಯಲ್ಲಿ ನಾನು ಏನು ಕ್ರಮ ತೆಗೆದುಕೊಳ್ಳಬೇಕೋ ಎಂಬುದನ್ನು ಪರಿಶೀಲಿಸಿ ಸೂಕ್ತ ತೀರ್ಮಾನ ತೆಗೆದುಕೊಳ್ಳುವುದಾಗಿ ತಿಳಿಸಿದರು.

**ರಾಜಕೀಯ ವೇದಿಕೆಯಾಗಬಾರದು:** ಸದನವನ್ನು ರಾಜಕೀಯ ವೇದಿಕೆಯನ್ನಾಗಿ ಮಾಡಿಕೊಳ್ಳುವ ಮನಸ್ಥಿತಿಯಿಂದ ಹೊರಬರಬೇಕು. ಪ್ರತಿಪಕ್ಷದ ಪಾತ್ರ ಈ ಬಾರಿ ಅತ್ಯಂತ ನೋವು ತಂದಿದೆ. ಪ್ರತಿಪಕ್ಷವಾಗಿ ಆಡಳಿತ ಪಕ್ಷದ ಸಭಾನಾಯಕರಿಗೆ ಇರುವಷ್ಟೇ ಜವಾಬ್ದಾರಿ ಇರುತ್ತದೆ. ಆದರೆ, ಅದನ್ನು ಎಲ್ಲರೂ ಅರ್ಥ ಮಾಡಿಕೊಳ್ಳಬೇಕು. ಸಂಸದೀಯ ವ್ಯವಸ್ಥೆಗೆ ಶಕ್ತಿ ಬರಬೇಕಾದರೆ ಪ್ರತಿಪಕ್ಷವೂ ಜವಾಬ್ದಾರಿಯುತವಾಗಿ ನಡೆದು ಕೊಳ್ಳಬೇಕು ಎಂದು ಹೇಳಿದರು.

ಕೇಂದ್ರ ಸರಕಾರದ 'ಒಂದು ರಾಷ್ಟ್ರ, ಒಂದು ಚುನಾವಣೆ' ವಿಚಾರದಲ್ಲಿ ಎರಡು ದಿನ ಚರ್ಚೆ ತಗೆದುಕೊಂಡು, ಯಶಸ್ವಿಯಾಗಿ ನಡೆಸಲು ಬಯಸಿದ್ದೆ. ಆದರೆ, ಆ ವಿಷಯದ ಬಗ್ಗೆ ಚರ್ಚೆಯಾಗಲೇ ಇಲ್ಲ. ಪ್ರತಿಪಕ್ಷಗಳು ಸಹಕಾರ ನೀಡದೇ ಇದಿದ್ದರಿಂದ ಈ ರೀತಿಯಾಯಿತು. ಇದು ಬೇಸರ ತರಿಸಿದೆ. ಸದನದಲ್ಲಿ ಎಲ್ಲರೂ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಬೇಕು. ಭಿನ್ನಾಭಿಪ್ರಾಯಗಳು ಇರುವುದು ಸಹಜ. ಅದನ್ನಾದರೂ ವ್ಯಕ್ತಪಡಿಸಬೇಕಿತ್ತು ಎಂದು ಹೇಳಿದರು.

**ಈ ಬಾರಿ 44 ಗಂಟೆ ಕಾಲ ಕಲಾಪ:** ಅಧಿವೇಶನ ಮಾ.31ರವರೆಗೆ ನಡೆಯಬೇಕಿತ್ತು. ಆದರೆ ಪರಿಸ್ಥಿತಿ ಕಾರಣದಿಂದ ಅನಿವಾರ್ಯವಾಗಿ ಬುಧವಾರವೇ ಮುಗಿಸಬೇಕಾಯಿತು. 13 ದಿನ, ಒಟ್ಟು 44 ಗಂಟೆಗಳ ಕಾಲ ಕಲಾಪ ನಡೆದಿದೆ. ನಡೆದ ಅಷ್ಟು ದಿನಗಳ ಕಾಲ ವ್ಯವಸ್ಥಿತವಾಗಿ ಕಲಾಪ ನಡೆದಿದೆ ಎಂದು ಸಭಾಧ್ಯಕ್ಷರು ತಮ್ಮ ಕ್ರಮವನ್ನು ಬಲವಾಗಿ ಸಮರ್ಥಿಸಿಕೊಂಡರು. ನಾನು ಸಭಾಧ್ಯಕ್ಷನಾದ ಕ್ಷಣದಿಂದ ಸಂಸದೀಯ ವ್ಯವಸ್ಥೆಗಳಿಗೆ ಮೌಲ್ಯ ತುಂಬುವ ಪ್ರಯತ್ನ ಮಾಡಿದ್ದೇನೆ. ಸಚಿವರು, ಶಾಸಕರ ಪಾಲ್ಗೊಳ್ಳುವಿಕೆ ಗಮನಿಸಿದಾಗ ಅವರು ಇನ್ನೂ ಉತ್ತಮವಾಗಿ ಸ್ಪಂದಿಸಬಹುದಿತ್ತು. ಸಚಿವರು, ಶಾಸಕರು, ಅಧಿಕಾರಿಗಳಿಗೆ ಸ್ವಯಂ ಜಾಗೃತಿ ಮೂಡಬೇಕು. ಆಗ ಮಾತ್ರ ಕಲಾಪಕ್ಕೆ ಅರ್ಥ ಬರುತ್ತದೆ ಎಂದು ಅಭಿಪ್ರಾಯಪಟ್ಟರು.



ಇತ್ತೀಚೆಗೆ ಮಂತ್ರಿಗಳು, ಶಾಸಕರು ನನ್ನ ಬಳಿ ಬಂದು ಅನುಪಸ್ಥಿತಿಗೆ ಕಾರಣಗಳನ್ನು ಕೊಟ್ಟು ಗೈರಾಗುವುದು ಹೆಚ್ಚಾಗುತ್ತಿದೆ. ಅನಿವಾರ್ಯ ಪರಿಸ್ಥಿತಿ ಇದ್ದಾಗ ಸರಿ, ಸಣ್ಣಪುಟ್ಟ ಕಾರಣಗಳಿಗೆ ಕಾರಣ ನೀಡಿ ಗೈರಾಗಬಾರದು ಎಂದು ಕಿವಿಮಾತು ಹೇಳಿದರು.